ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(31)

ಇಲಾಖೆ / ವಿಷಯ : DEPARTMENT / SUBJECT: ಸಂಸತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 9/3/2021

# 'ತೈಲ'ದಲ್ಲಿ ಕೊಚ್ಚಿಹೋದ ಕಲಾಪ

ನವದೆಹಲಿ: ಸಂಸತ್‌ನ ಬಜೆಟ್ ಅಧಿವೇಶನದ ದ್ವಿತೀಯಾರ್ಧವು ಆರಂಭಗೊಂಡ ದಿನವೇ ಕೊಚ್ಚಿ ಹೋಗಿದೆ. ಏರುತ್ತಿರುವ ತೈಲ ದರದ ಕುರಿತು ಚರ್ಚೆಗೆ ಅವಕಾಶ ನೀಡಬೇಕೆಂದು ಪ್ರತಿಪಕ್ಷಗಳ ಸದಸ್ಯರು ಪಟ್ಟು ಹಿಡಿದು ಗದ್ದಲವೆಬ್ಬಿಸಿದ ಕಾರಣ, ರಾಜ್ಯಸಭೆಯ ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ದರ ಏರಿಕೆಗೆ ಸಂಬಂಧಿಸಿ ಚರ್ಚೆಯಾಗಬೇಕು ಎಂದು ಪ್ರತಿಪಕ್ಷಗಳು ಒತ್ತಾಯಿಸಿದವು. ಆದರೆ, ಸಭಾಧ್ಯಕ್ಷರು ಅದಕ್ಕೆ ಅನುಮತಿ ನೀಡಲಿಲ್ಲ. ಇದಕ್ಕೆ ಖಂಡಿಸಿ ಪ್ರತಿಪಕ್ಷಗಳು ಗದ್ದಲವೆಬ್ಬಿಸಿದ್ದು, ಕೊನೆಗೆ ಕಲಾಪ ಮುಂದೂಡಲಾಯಿತು.

**ಚುನಾವಣೆಗೂ ಮುನ್ನ ಸಮಾಪ್ತಿ?:** ಮಂಗಳವಾರದಿಂದ ಉಭಯ ಸದನಗಳ ಕಲಾಪಗಳು ಮಾಮೂಲಿನಂತೆ ಬೆಳಗ್ಗೆ 11ರಿಂದ ಸಂಜೆ 6ರವರೆಗೆ ನಡೆಯಲಿದೆ. ಕೊರೊನಾ ಹಿನ್ನೆಲೆಯಲ್ಲಿ ಕಲಾಪದ ಅವಧಿಯನ್ನು ಬೆ.9ರಿಂದ ಮ.2ರವರೆಗೆ ನಿಗದಿಪಡಿಸಲಾಗಿತ್ತು. ಆದರೆ, ಈಗ ಅದನ್ನು ಬದಲಿಸಿ ಹಿಂದಿನ ಸಮಯವನ್ನೇ ನಿಗದಿ ಮಾಡಲಾಗಿದೆ. ಇದೇ ವೇಳೆ, ಪಂಚರಾಜ್ಯಗಳ ಚುನಾವಣೆ ಆರಂಭಕ್ಕೂ ಮುನ್ನವೇ ಅಧಿವೇಶನ ಮೊಟಕುಗೊಳ್ಳುವ ಸಾಧ್ಯತೆಯಿದೆ. ಹಾಗಾಗಿ, ಏ.8ರವರೆಗೆ ನಡೆಯಬೇಕಿರುವ ಅಧಿವೇಶನ ಚುನಾವಣೆ ಹಿನ್ನೆಲೆಯಲ್ಲಿ ಮಾ.27ಕ್ಕೇ ಮುಕ್ತಾಯಗೊಳಿಸುವ ಕುರಿತು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ.

## ಖರ್ಗೆ ಹೇಳಿದ್ದೇನು?

ಪೆಟ್ರೋಲ್ ದರವು ಲೀ.ಗೆ 100 ರೂ. ಸಮೀಪಿಸಿದೆ, ಡೀಸೆಲ್‌ಗೆ 80 ರೂ. ದಾಟಿದೆ. ಎಲ್‌ಪಿಜಿ ದರವು ನಿರಂತರವಾಗಿ ಏರಿಕೆಯಾಗುತ್ತಿದೆ. ಪೆಟ್ರೋಲಿಯಂ ಉತ್ಪನ್ನಗಳಿಗೆ ಅಬಕಾರಿ ಸುಂಕ ಹಾಗೂ ಸೆಸ್ ಹಾಕುವ ಮೂಲಕ ಸರ್ಕಾರವು ಬರೋಬ್ಬರಿ 21 ಲಕ್ಷ ಕೋಟಿ ರೂ.ಗಳನ್ನು ಸಂಗ್ರಹಿಸಿದೆ. ದರ ಏರಿಕೆಯಿಂದ ಜನಸಾಮಾನ್ಯರು ಕಂಗಾಲಾಗಿದ್ದಾರೆ. ಹೀಗಾಗಿ ಈ ಕುರಿತು ಚರ್ಚೆಗೆ ಅವಕಾಶ ನೀಡಲೇಬೇಕು ಎಂದು ಖರ್ಗೆ ಅವರು ಒತ್ತಾಯಿಸಿದರು. ಆದರೆ, ರಾಜ್ಯಸಭಾ ಅಧ್ಯಕ್ಷರು ಅದಕ್ಕೆ ಅವಕಾಶ ನೀಡಲಿಲ್ಲ.